ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮುಖ್ಯ ಲೆಕ್ಕಾಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು ಇವರ ಪತ್ರ ಸಂಖ್ಯೆ: ಕೊಜಿಪಂ:ಆಡಳಿತ:ಸೇ.6: 2015-16 ದಿನಾಂಕ 20.04.2015.

:-:

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್ ಇವರು ಮೇಲೆ ಓದಲಾದ ದಿನಾಂಕ 20.04.2015 ರ ಪತ್ರದಲ್ಲಿ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ ಕೊಡಗು ಇವರ ಉಪಯೋಗಕ್ಕಾಗಿ, ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 12 ಜಿ 292 ನಿರುಪಯುಕ್ತವಾಗಿರುವ ಕಾರಣ ಹೊಸ ವಾಹನ ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಜಿಲ್ಲಾ ಪಂಚಾಯತ್ ಲೆಕ್ಕ ಶೀರ್ಷಿಕೆ "2515-00-101-0-28 (ಯೋಜನೇತರ)" ರಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 384 ಕೆಎಸ್‌ಎಸ್ 2014 ಬೆಂಗಳೂರು**
**ದಿನಾಂಕ 16.07.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೊಡಗು ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾದಿಕಾರಿಗಳ ಉಪಯೋಗಕ್ಕಾಗಿ ಹೊಸ ವಾಹನವನ್ನು ಲೆಕ್ಕ ಶೀರ್ಷಿಕೆ 2515-00-101-0-28 (ಯೋಜನೇತರ) ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 111 ಶಿವಾನಿ 2011 ದಿನಾಂಕ 09.05.2013 ರಲ್ಲಿ ನಿಗದಿಪಡಿಸಿರುವ ರೂ. 6.50 ಲಕ್ಷಗಳ (ಆರುವರೆ ಲಕ್ಷ ರೂಪಾಯಿಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.
2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.
3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

. . 2 ..

4. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 268 ವೆಚ್ಚ-6/ 2015 ದಿನಾಂಕ 02.07.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಮಡಿಕೇರಿ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ನಗದು ಶಾಖೆ (ಸೇವೆಗಳು-ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.